ವಿಷಯ : ಲಾಲ್‌ಬಾಗ್‌ನ ಫಲಪುಷ್ಪ ಪ್ರದರ್ಶನಕ್ಕೆ ವಿತರಿಸಲಾದ ಉಚಿತ ಪಾಸುಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 429 (673)

ಶ್ರೀ ಜಿ. ಸಿ. ಸಿದ್ದನಗೌಡರ್ (ಕಲಘಟಗಿ) :– ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಈ ವರ್ಷ ನಡೆದ ಲಾಲ್‌ಬಾಗಿನ ಫಲಪುಷ್ಪ ಪ್ರದರ್ಶನದ ಸಮಯದಲ್ಲಿ ಎಷ್ಟು ಉಚಿತ ಪಾಸ್ ಗಳನ್ನು ವಿತರಣೆ ಮಾಡಲಾಗಿದೆ ?

ಆ) ಈ ಪಾಸ್‌ಗಳನ್ನು ಮೈಸೂರು ಕಲಾ ಸಂಘದ ಉಪಾಧ್ಯಕ್ಷರು, ಕಾರ್ಯದರ್ಶಿಗಳು ಮನಬಂದಂತೆ ವಿತರಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಮುಂಬರುವ ವರ್ಷಗಳಲ್ಲಿ ಸರ್ಕಾರವೇ ತೋಟಗಾರಿಕೆ ಇಲಾಖೆಯ ಹೆಸರಿನಲ್ಲಿ ಪಾಸು ಗಳನ್ನು ಮುದ್ರಿಸಿ, ಈ ಪಾಸ್‌ಗಳ ವಿತರಣೆಯನ್ನು ಸರ್ಕಾರವೇ ವಹಿಸಿಕೊಳ್ಳಲು ಕ್ರಮ ಕೈಗೊಳ್ಳುವುದೇ ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) :–

ಅ) 16,000 ಉಚಿತ ಪಾಸ್‌ಗಳನ್ನು ವಿತರಣೆ ಮಾಡಲಾಗಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ : ರೈತರ ಸಾಲವನ್ನು ಮನ್ನಾ ಮಾಡುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 431 (732)

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆ ಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) 10,000 ರೂಪಾಯಿ ಸಾಲವನ್ನು ಮನ್ನಾ ಮಾಡುವಲ್ಲಿ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ ಕಾರದ ಪಾತ್ರವೇನು ? ಹಾಗೂ ಅದನ್ನು ಕೂಡಲೇ ಅನುಷ್ಠಾನ ಮಾಡುವುದಕ್ಕೆ ಸರ್ಕಾರಕ್ಕಿರುವ ತೊಂದರೆ ಯೇನು ?

ಶ್ರೀ ಕೆ. ಹೆಚ್. ಪಾಟೀಲ್ (ಸಹಕಾರ ಮಂತ್ರಿಗಳು) :–

ಅ) ರೂ. 10,000 ಗಳ ಸಾಲ ಮನ್ನಾ ಮಾಡುವಲ್ಲಿ ರೈತರುಗಳಿಗೆ ಕೊಡಬೇಕಾದಂತಹ ಒಟ್ಟು ಹಣ ದಲ್ಲಿ ರಾಜ್ಯ ಸರ್ಕಾರ ಶೇ. 50 ಹೊರೆಯನ್ನು ಮತ್ತು ಕೇಂದ್ರ ಸರ್ಕಾರ ಉಳಿದ ಶೇ. 50ರ ಹೊರೆಯನ್ನು ಭರಿಸು ತ್ತದೆ. ಇದನ್ನು ಸರ್ಕಾರ ಈಗಾಗಲೇ ಅನುಷ್ಠಾನಕ್ಕೆ ತಂದಿರುತ್ತದೆ.

ವಿಷಯ :– ಸಕ್ಕರೆ ಕಾರ್ಖಾನೆಗಳ ಅಭಿವೃದ್ಧಿ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 432 (730)

ಶ್ರೀ ಮಲ್ಲಾರಗೌಡ ಎಸ್. ಪಾಟೀಲ್ (ಸಂಕೇಶ್ವರ) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆ ಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಹಕಾರ ಕ್ಷೇತ್ರದಲ್ಲಿ ಒಟ್ಟು ಎಷ್ಟು ಸಕ್ಕರೆ ಕಾರ್ಖಾನೆಗಳಿವೆ ?

ಆ) ಸಹಕಾರಿ ಕ್ಷೇತ್ರದಲ್ಲಿಯ ಸಕ್ಕರೆ ಕಾರ್ಖಾನೆಗಳನ್ನು ಮುಚ್ಚಿರುವುದಕ್ಕೆ ಕಾರಣಗಳೇನು ?

ಇ) ಮುಚ್ಚಿರುವ ಸಕ್ಕರೆ ಕಾರ್ಖಾನೆಗಳ ಮರು ಪ್ರಾರಂಭಕ್ಕೆ ಸರ್ಕಾರದ ಕಾರ್ಯಕ್ರಮಗಳೇನು ?

ಶ್ರೀ ಕೆ. ಹೆಚ್. ಪಾಟೀಲ್ (ಸಹಕಾರ ಸಚಿವರು) :–

ಅ) 16.

ಆ) ಕಾರ್ಖಾನೆಯ ಕಾರ್ಯ ವ್ಯಾಪ್ತಿ ಕ್ಷೇತ್ರದಲ್ಲಿ ಸಾಕಷ್ಟು ಕಬ್ಬು ದೊರೆಯದೇ ಇರುವುದರಿಂದ ಚಿತ್ರದುರ್ಗ ಜಿಲ್ಲೆಯ ಹಿರಿಯೂರಿನಲ್ಲಿರುವ ಖಾಸಗಿ ವಿಲಾಸ ಸಹಕಾರ ಸಕ್ಕರೆ ಕಾರ್ಖಾನೆ ಮಾತ್ರ 1984–85ನೇ ಸಾಲಿನಿಂದ ಸ್ಥಗಿತಗೊಂಡಿದೆ.

ಇ) ಈ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ